# OCTOBER 03. 2023
# ALL INDIA RADIO- DHARWAD
# PRADESH SAMACHARA (KANNADA) 7:05 AM

**ಮುಖ್ಯಾಂಶಗಳು:**

- **ಗ್ರಾಮ ನ್ಯಾಯಾಲಯಗಳ ಸ್ಥಾಪನೆಗೆ ಸರ್ಕಾರದ ಚಿಂತನೆ –ಮುಖ್ಯಮಂತ್ರಿ ಸಿದ್ದರಾಮಯ್ಯ.**

- **ರಾಜ್ಯದೆಲ್ಲೆಡೆ ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ ಹಾಗೂ ಲಾಲ ಬಹದ್ದೂರ್ ಶಾಸ್ತ್ರಿಯವರ ಜನ್ಮ ದಿನ ಆಚರಣೆ.**

- **ಪ್ರತಿ ಗ್ರಾಮ ಪಂಚಾಯಿತಿಗೆ ಎರಡು ಅಥವಾ ಮೂರರಂತೆ ಒಂದು ವರ್ಷದಲ್ಲಿ 600 ಕರ್ನಾಟಕ ಪಬ್ಲಿಕ್ ಶಾಲೆಗಳ ಆರಂಭಕ್ಕೆ ಸಿದ್ಧತೆ– ಸಚಿವ ಮಧು ಬಂಗಾರಪ್ಪ.**

- **ಅಮೆರಿಕಾ ಮೂಲದ ಕಂಪನಿಗಳೊಂದಿಗೆ ಆರ್ಥಿಕ ಮತ್ತು ವಾಣಿಜ್ಯ ಸಹಕಾರ ಮತ್ತಷ್ಟು ಸುದೃಢ – ಸಚಿವ ಎಂ.ಬಿ.ಪಾಟೀಲ್.**

**ವಾರ್ತೆಗಳ ವಿವರ...**

**ಮಹಾತ್ಮಾ ಗಾಂಧೀಜಿಯವರ ಕನಸಿನ ಅಧಿಕಾರ ವಿಕೇಂದ್ರೀಕರಣ ಮತ್ತು ಮಹಿಳಾ ಮೀಸಲಾತಿ ಚಿಂತನೆಗಳು ಸಾಕಾರಗೊಂಡಾಗ ಮಾತ್ರ ಪ್ರಜಾಪ್ರಭುತ್ವ ಯಶಸ್ವಿಯಾಗುತ್ತದೆ. ಗ್ರಾಮ ಸ್ವರಾಜ್ಯದ ಚಿಂತನೆಯ ಅನುಷ್ಠಾನ ಗಾಂಧೀಜಿ ಅವರ ನೀತಿಯಾಗಿತ್ತು. ಸ್ಥಳೀಯ ಸಂಸ್ಥೆ ಹಾಗೂ ಪಂಚಾಯಿತಿಗಳಲ್ಲಿ ಶೇಕಡ 50ರಷ್ಟು ಮೀಸಲಾತಿ ಜಾರಿಗೆ ತರುವಲ್ಲಿ ಹಲವರ ಶ್ರಮ ಅಭಿನಂದನಾರ್ಹ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಿನ್ನೆ ನಡೆದ ಗಾಂಧಿ ಗ್ರಾಮ ಪುರಸ್ಕಾರ ಪ್ರಶಸ್ತಿ ಪ್ರದಾನ ಹಾಗೂ ಸ್ವಚ್ಛ ಸರ್ವೇಕ್ಷಣಾ ಗ್ರಾಮೀಣ ರಾಜ್ಯ ಮಟ್ಟದ ಪ್ರಶಸ್ತಿ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.**

ಗ್ರಾಮಗಳ ವ್ಯಾಜ್ಯಗಳು ಗ್ರಾಮಗಳಲ್ಲೇ ಬಗೆಹರಿಯಬೇಕು ಎನ್ನುವ ಮಹಾತ್ವಾಕಾಂಕ್ಷೆಯಿಂದ ಸರ್ಕಾರ ಗ್ರಾಮ ನ್ಯಾಯಾಲಯಗಳ ಸ್ಥಾಪನೆ ಕುರಿತು ಗಂಭೀರ ಚಿಂತನೆ ನಡೆಸಿದೆ. ಇದು ಅನುಷ್ಠಾನಗೊಂಡರೆ ಗ್ರಾಮೀಣ ಜನತೆಗೆ ಸಾಕಷ್ಟು ಅನುಕೂಲ ದೊರೆಯಲಿದೆ. ಖಾದಿ ಹಾಗೂ ಗ್ರಾಮೋದ್ಯೋಗಕ್ಕೆ ಉತ್ತೇಜನ ನೀಡಲಾಗುವುದು. ಗ್ರಾಮೋದ್ಯೋಗ ಉತ್ಪನ್ನಗಳಿಗೆ ಮಾರುಕಟ್ಟೆ ವಿಸ್ತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

<><><>

ಇದೇ ಸಂದರ್ಭದಲ್ಲಿ; ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಪ್ರತಿ ವರ್ಷ ಗಾಂಧಿ ಜಯಂತಿ ದಿನದಂದು ನೀಡುವ 'ಗಾಂಧಿ ಗ್ರಾಮ ಪುರಸ್ಕಾರ'ವನ್ನು 233 ಗ್ರಾಮ ಪಂಚಾಯಿತಿಗಳಿಗೆ, 4 ಗ್ರಾಮ ಪಂಚಾಯಿತಿಗಳಿಗೆ ವಿಶೇಷ 'ಗಾಂಧಿ ಗ್ರಾಮ ಪುರಸ್ಕಾರ ಹಾಗೂ 15 ಸ್ವಚ್ಛ ಸರ್ವೇಕ್ಷಣ ಗ್ರಾಮಿಣ 2023 ರಾಜ್ಯ ಮಟ್ಟದ ಪ್ರಶಸ್ತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರದಾನ ಮಾಡಿದರು. 'ಗಾಂಧಿ ಗ್ರಾಮ ಪುರಸ್ಕಾರ'ಕ್ಕೆ ಆಯ್ಕೆಯಾದ ಗ್ರಾಮ ಪಂಚಾಯತಿಗಳಿಗೆ ಪ್ರಶಸ್ತಿ ಪ್ರಮಾಣ ಪತ್ರ,  ಸ್ಮರಣಿಕೆ ಹಾಗೂ 5 ರೂ. ಲಕ್ಷ ಪ್ರೋತ್ಸಾಹಧನ ನೀಡಿ ಗೌರವಿಸಲಾಯಿತು

<><><>

ಮಹಾತ್ಮಾ ಗಾಂಧೀಜಿಯವರ 154ನೆಯ ಜಯಂತಿ ಅಂಗವಾಗಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ರಾಜಭವನದಲ್ಲಿ ನಿನ್ನೆ ಮಹಾತ್ಮಾ ಗಾಂಧೀಜಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಗೌರವ ನಮನ ಸಲ್ಲಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ವಿಧಾನಸೌಧದ ಆವರಣದಲ್ಲಿರುವ ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ ಹಾಗೂ ಮಾಜಿ ಪ್ರಧಾನಿಗಳಾದ ದಿವಂಗತ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನದ ಅಂಗವಾಗಿ ಅವರ ಪ್ರತಿಮೆ ಬಳಿ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ, ಪುಷ್ಪನಮನ ಸಲ್ಲಿಸಿದರು. ಬಳಿಕ ಮುಖ್ಯಮಂತ್ರಿ ಮಾತನಾಡಿ; ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಮತ್ತು ದೇಶದ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಆದರ್ಶಗಳು ಇಂದಿಗೂ ಪ್ರೇರಣಾದಾಯಕವಾಗಿವೆ. ಸತ್ಯ, ಅಹಿಂಸೆಯನ್ನು ಇಡೀ ಬದುಕಿನುದ್ದಕ್ಕೂ ಅಳವಡಿಸಿಕೊಂಡ ಮಹಾತ್ಮ ಗಾಂಧೀಜಿ ಅವರು ನಮ್ಮೆಲ್ಲರಿಗೂ ಸ್ಫೂರ್ತಿ. ಅದೇ ರೀತಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಸರಳ, ಸಜ್ಜನಿಕೆ, ಪ್ರಾಮಾಣಿಕತೆಗೆ ಹೆಸರಾಗಿದ್ದು, ಅವರ ಆದರ್ಶಗಳು ಇಂದಿಗೂ ಪ್ರಸ್ತುತ ಎಂದು ತಿಳಿಸಿದರು.

<><><>

ತುಮಕೂರಿಗೆ ಎರಡು ಬಾರಿ ಭೇಟಿ ನೀಡಿದ್ದ ಮಹಾತ್ಮಾ ಗಾಂಧೀಜಿಯವರು, ದೇಶದ ಇತಿಹಾಸದಲ್ಲಿ ಮೊಟ್ಟಮೊದಲ ಬಾರಿಗೆ ಅಸ್ಪೃಶ್ಯತೆಯ ಬಗ್ಗೆ ಇಲ್ಲಿಯೇ ಭಾಷಣ ಮಾಡಿದ್ದರು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಮರಿಸಿದ್ದಾರೆ. ತುಮಕೂರು ಜೂನಿಯರ್ ಕಾಲೇಜು ಮೈದಾನದಲ್ಲಿ ಮಹಾತ್ಮ ಗಾಂಧೀಜಿ ಅವರು ತಂಗಿದ್ದ ನವೀಕೃತ ಕೊಠಡಿ ಉದ್ಘಾಟಿಸಿ ಮಾತನಾಡಿದ ಅವರು, ಗಾಂಧೀಜಿ ದೇಶದ ಭವಿಷ್ಯಕ್ಕಾಗಿ ತಮ್ಮನ್ನು ತಾವು ಅರ್ಪಿಸಿಕೊಂಡ ಮಹಾನ್ ನಾಯಕ ಎಂದರು. ದೇಶದಲ್ಲಿನ ವಿವಿಧ ಧರ್ಮಗಳು ಹಾಗೆಯೇ ಇರಬೇಕೆಂಬ ಉದ್ದೇಶದಿಂದ ಭಾರತವನ್ನು ಹಿಂದೂ ದೇಶ ಎಂದು ಘೋಷಿಸಲಿಲ್ಲ, ಸಂವಿಧಾನದ ಮೂಲಕವೂ ವಿವಿಧತೆಯಲ್ಲಿ ಏಕತೆ ಮೂಡಲು ಮಹಾತ್ಮ ಗಾಂಧೀಜಿ ಅವರೇ ಕಾರಣ ಎಂದು ಸ್ಮರಿಸಿದರು. ಭಾರತದ ಇಬ್ಬರು ಮಹಾನ್ ಚೇತನಗಳು ಒಂದೇ ದಿನ ಜನ್ಮಿಸಿವೆ, ಲಾಲ್ ಬಹದ್ದೂರ್ ಶಾಸ್ತ್ರಿ ಅವರು ದೇಶದ ಕಠಿಣ ಸಂದರ್ಭದಲ್ಲಿ ಪ್ರಧಾನಿಯಾಗಿ ಕ್ಷೀರಕ್ರಾಂತಿ ಮಾಡಿದರು, ಪಾಕಿಸ್ತಾನದೊಂದಿಗೆ ಯುದ್ಧ ಮಾಡಿದರು, ದೇಶ ಕಟ್ಟಲು ಜವಾನ್, ಕಿಸಾನ್ ಇಬ್ಬರು ಅವಶ್ಯಕ ಎನ್ನುವುದನ್ನು ಮನಗಂಡಿದ್ದರು ಎಂದರು.

<><><>

ಗಾಂಧೀಜಿಯವರ ಸ್ವಚ್ಛ ಭಾರತ ಕನಸನ್ನು ನನಸು ಮಾಡಬೇಕಿದೆ. ಇದನ್ನು ಇಂದಿಗಷ್ಟೇ ಸೀಮಿತ ಮಾಡದೆ ಪ್ರತಿವಾರ ಚುನಾಯಿತ ಪ್ರತಿನಿಧಿಗಳು ಜನರ ಸಹಭಾಗಿತ್ವದಲ್ಲಿ ಸ್ವಚ್ಛತಾ ಕಾರ್ಯದಲ್ಲಿ ಭಾಗಿಯಾಗಬೇಕು ಎಂದು ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ ಹೇಳಿದ್ದಾರೆ. ಗಾಂಧಿ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ಶ್ರಮದಾನದಲ್ಲಿ ಪಾಲ್ಗೊಂಡು, ಸ್ವಚ್ಛತಾ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡುತ್ತಿದ್ದರು. ಮೈಸೂರು ಮಾದರಿಯಲ್ಲಿ ಬಳ್ಳಾರಿಯನ್ನು ಸುಂದರ ಹಾಗೂ ಸ್ವಚ್ಛ ನಗರವನ್ನಾಗಿ ಮಾಡುವ ಸಂಕಲ್ಪ ಹೊಂದಿದ್ದೇವೆ. ಅದಕ್ಕಾಗಿ ಪ್ರತಿ ವಾರ್ಡ್‌ನ್ನೂ ಸ್ವಚ್ಛವಾಗಿಟ್ಟುಕೊಳ್ಳಬೇಕು, ಹಾಗಾಗಿ ಸ್ಥಳೀಯ ಜನಪ್ರತಿನಿಧಿಗಳು ಪ್ರತಿವಾರ ಶ್ರಮದಾನ ಸ್ವಚ್ಛತಾ ಕಾರ್ಯ ಮಾಡಬೇಕು ಎಂದರು.

<><><>

ದೇಶವನ್ನು ಆಂಗ್ಲರ ಕಪಿಮುಷ್ಠಿಯಿಂದ ಮುಕ್ತಿಗೊಳಿಸಲು ನಡೆದ ಸ್ವಾತಂತ್ರ್ಯ ಚಳವಳಿಯಲ್ಲಿ ಹಲವಾರು ಹೋರಾಟಗಾರರ ತ್ಯಾಗ ಬಲಿದಾನಗಳಿದ್ದು, ಇದರಲ್ಲಿ ಗಾಂಧೀಜಿಯವರ ಪಾತ್ರ ಪ್ರಮುಖವಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಹೇಳಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಹಮ್ಮಿಕೊಂಡಿದ್ದ ರಾಷ್ಟ್ರಪಿತ ಮಹಾತ್ಮ ಗಾಂಧಿಯವರ 154 ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸರಳ ಸಜ್ಜನಿಕೆಯ ವ್ಯಕ್ತಿತ್ವದ ಗಾಂಧೀಜಿಯವರು ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಅವರ ಅಹಿಂಸಾ ಮಾರ್ಗದ ಅನುಕರಣೀಯ ಎಂದರು. ಇದೇ ಸಂದರ್ಭದಲ್ಲಿ ಸರ್ವಧರ್ಮ ಪ್ರಾರ್ಥನೆ ನಡೆಯಿತು.

<><><>

ದೇಶದ ಎಲ್ಲ ಜನರು ಒಂದೇ ಭಾವನೆಯಿಂದ ಜೀವನ ನಡೆಸಬೇಕು. ಎಲ್ಲ ಧರ್ಮದವರು ಒಂದೇ. ಮಹಾತ್ಮಾ ಗಾಂಧೀಜಿಯವರ ಜೊತೆ ಮೌಲಾನಾ ಅಬ್ದುಲ್ ಕಲಾಂ ಅಜಾದ್, ಭಗತಸಿಂಗ್, ಚಂದ್ರಶೇಖರ ಅಜಾದ್, ನೆಹರೂ, ಅಂಬೇಡ್ಕರ್ ಸೇರಿದಂತೆ ಎಲ್ಲ ಧರ್ಮದ ಮಹಾನ ನಾಯಕರು ಒಗ್ಗಟ್ಟಿನಿಂದ ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡು ದೇಶಕ್ಕೆ ಸ್ವಾತಂತ್ರ್ಯ ದೊರಕಿಸಿಕೊಟ್ಟರು. ಗಾಂಧೀಜಿಯವರು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ನಡೆಯಬೇಕು ಎಂದು ಕಾರ್ಮಿಕ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದ್ದಾರೆ. ಧಾರವಾಡದಲ್ಲಿ ನಿನ್ನೆ ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿಯವರ 154ನೇ ಜಯಂತಿ ಅಂಗವಾಗಿ ಗಾಂಧೀ ಭಜನೆ, ಸರ್ವಧರ್ಮ ಪ್ರಾರ್ಥನೆ ಹಾಗೂ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಲಾಲ್ ಬಹಾದ್ದೂರ್ ಶಾಸ್ತ್ರಿ ಅವರು ಪ್ರಧಾನಮಂತ್ರಿ ಆಗಿದ್ದ ಸಂದರ್ಭದಲ್ಲಿ ದೇಶದಲ್ಲಿ ಹಸಿರು ಕ್ರಾಂತಿ, ಬಿಳಿ ಕ್ರಾಂತಿ ಮೂಲಕ ಜನರಿಗೆ ಅನುಕೂಲಕರವಾದ ವಾತಾವರಣ ನಿರ್ಮಿಸಿಕೊಟ್ಟರು. ಜೈ ಜವಾನ್ ಜೈ ಕಿಸಾನ್ ಘೋಷಣೆಗಳ ಮೂಲಕ ದೇಶದಲ್ಲಿ ಸಂಚಲನ ಮೂಡಿಸಿದ್ದರು ಎಂದು ಸ್ಮರಿಸಿದರು.

<><><>

ಗಾಂಧಿ ಜಯಂತಿ ಅಂಗವಾಗಿ ಹುಬ್ಬಳ್ಳಿ ನೈಋತ್ಯ ರೈಲ್ವೆ ವಲಯ ಸಿದ್ಧಾರೂಢ ರೈಲ್ವೆ ನಿಲ್ದಾಣದಲ್ಲಿ ನಿನ್ನೆ ಸ್ವಚ್ಛತೆಯೇ ಸೇವೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಸ್ವಚ್ಛತೆಯ ಅರಿವು ಕುರಿತು ಶಾಲಾ ಮಕ್ಕಳು ಕಿರುನಾಟಕ ಪ್ರದರ್ಶಿಸಿದರು. ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ರಾಜ್ಯದಲ್ಲಿ ಪ್ರತಿ ಗ್ರಾಮ ಪಂಚಾಯಿತಿಗೆ ಎರಡು ಅಥವಾ ಮೂರು ಶಾಲೆಗಳಂತೆ 600 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಮುಂದಿನ ಒಂದು ವರ್ಷದಲ್ಲಿ ತೆರೆಯಲು ಸಿದ್ಧತೆಗಳನ್ನು ನಡೆಸಲಾಗಿದ್ದು, ಶಾಲೆಗಳ ಅಭಿವೃದ್ಧಿಗೆ ಕಂಪನಿಗಳ ಸಾಮಾಜಿಕ ಹೊಣೆಗಾರಿಕೆ ನಿಧಿ ಸಹಯೋಗ ಪಡೆಯಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ದೇವನಹಳ್ಳಿ ತಾಲ್ಲೂಕಿನ ವಿಶ್ವನಾಥಪುರದಲ್ಲಿ ನನ್ನ ಶಾಲೆ ನನ್ನ ಕೊಡುಗೆಯಡಿ ಸಿ.ಎಸ್.ಆರ್ ಅನುದಾನದಲ್ಲಿ ಶಾಲಾ ಕೊಠಡಿಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ರಾಜ್ಯದಲ್ಲಿ 2 ಸಾವಿರ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ತೆರೆಯಲು ಯೋಜನೆ ರೂಪಿಸಲಾಗಿದೆ. ಕಡಿಮೆ ದಾಖಲಾತಿ ಇರುವ ಶಾಲೆಗಳನ್ನು ಹಂತ ಹಂತವಾಗಿ ಸುಸಜ್ಜಿತ ಮೂಲ ಸೌಕರ್ಯಗಳುಳ್ಳ ಕ್ಲಸ್ಟರ್ ಶಾಲೆಗಳಿಗೆ ಸೇರ್ಪಡೆ ಮಾಡಿ, ವಿದ್ಯಾರ್ಥಿಗಳು ಶಾಲೆಗಳಿಗೆ ತೆರಳಲು ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲಾಗುವುದು. ಶಾಲೆಗಳಲ್ಲಿ ಕ್ರೀಡೆ ಹಾಗೂ ಪಠ್ಯೇತರ ಚಟುವಟಿಕೆಗಳಿಗೂ ಆದ್ಯತೆ ನೀಡಲಾಗುವುದು ಎಂದರು. ರಾಜ್ಯದಲ್ಲಿ 53 ಸಾವಿರ ಶಿಕ್ಷಕರ ಕೊರತೆಯಿದ್ದು, ಶಿಕ್ಷಕರ ನೇಮಕಾತಿಗಾಗಿ ಕ್ರಮ ವಹಿಸಲಾಗುತ್ತಿದೆ. ಈಗಾಗಲೇ ಪಠ್ಯ ಪುಸ್ತಕ ಪರಿಷ್ಕರಣೆ ಮಾಡಲಾಗಿದೆ. ವಿದ್ಯಾರ್ಥಿಗಳು ಅನುತ್ತೀರ್ಣರಾಗಿ, ಶಾಲಾ ಕಾಲೇಜುಗಳಿಂದ ಹೊರಗುಳಿಯುವುದನ್ನು ತಪ್ಪಿಸಲು ಎರಡು ಪೂರಕ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. ಮಕ್ಕಳನ್ನು ಶಾಲೆಗಳಿಂದ ಹೊರಗುಳಿಯದಂತೆ ಮಾಡಲು ಹಲವು ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

<><><>

ಅಮೆರಿಕಾ ಮೂಲದ ಕಂಪನಿಗಳೊಂದಿಗೆ ಆರ್ಥಿಕ ಮತ್ತು ವಾಣಿಜ್ಯ ಸಹಕಾರ ಮತ್ತಷ್ಟು ಸುದೃಢಗೊಳಿಸುವ ನಿಟ್ಟಿನಲ್ಲಿ ಪ್ರಯತ್ನಗಳು ಯಶಸ್ವಿಯಾಗಿವೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಅಮೆರಿಕಾದ ಡಲ್ಲಾಸ್‌ನಲ್ಲಿ ನಿನ್ನೆ ತಿಳಿಸಿದ್ದಾರೆ. ಅಮೆರಿಕಾದಲ್ಲಿನ ಭಾರತೀಯ ಕಾನ್ಸುಲ್ ಜನರಲ್ ಡಿ.ಸಿ.ಮಂಜುನಾಥ್ ಅವರೊಂದಿಗೆ ಚರ್ಚೆ ನಡೆಸಿದ ಬಳಿಕ ಮಾಧ್ಯಮ ಹೇಳಿಕೆ ನೀಡಿರುವ ಅವರು, ಐಟಿ–ಬಿಟಿ, ಎಲೆಕ್ಟ್ರಾನಿಕ್ಸ್, ಸೆಮಿ ಕಂಡಕ್ಟರ್, ವಿದ್ಯುತ್ ಚಾಲಿತ ವಾಹನ ತಯಾರಿಕೆ ಮುಂತಾದ ವಲಯಗಳಲ್ಲಿ ಕರ್ನಾಟಕ ಮುಂಚೂಣಿಯಲ್ಲಿದ್ದು, ಪ್ರತಿಷ್ಠಿತ ಕಂಪನಿಗಳೊಂದಿಗೆ ಸಹಭಾಗಿತ್ವ ಅಪೇಕ್ಷಣಿಯವಾಗಿದೆ. ಸ್ಪರ್ಧಾತ್ಮಕ ವಾತಾವರಣದಲ್ಲಿ ಬಂಡವಾಳ ಹೂಡಿಕೆ ಹಾಗೂ ಆದಾಯ ವೃದ್ಧಿಗೆ ಇದು ಸಹಕಾರಿಯಾಗಲಿದೆ ಎಂದರು. ರಾಜ್ಯದ ಹಿತದೃಷ್ಟಿಯಿಂದ ಹೂಡಿಕೆ ಮತ್ತು ಸಹಭಾಗಿತ್ವ ಹೆಚ್ಚಳವಾಗಬೇಕಿದೆ. ಕೈಗಾರಿಕೆ, ಶಿಕ್ಷಣ ಮತ್ತು ಕೌಶಲ್ಯ ವಲಯಗಳಲ್ಲಿ ಗುಣಮಟ್ಟದ ಪ್ರಗತಿಗೆ ಸರ್ಕಾರ ಉತ್ಸುಕವಾಗಿದೆ ಎಂದು ತಿಳಿಸಿದರು.

<><><>

ಧಾರವಾಡ ಜಿಲ್ಲಾ ಲಾನ್ ಟೆನಿಸ್ ಸಂಸ್ಥೆಯ ಆತಿಥ್ಯದಲ್ಲಿ ಅಕ್ಟೋಬರ್–2023ರಲ್ಲಿ ಜರುಗಲಿರುವ ಅಂತರಾಷ್ಟ್ರೀಯ ಲಾನ್ ಟೆನಿಸ್ ಪಂದ್ಯಾವಳಿಯನ್ನು ಯಶಸ್ವಿಯಾಗಿ ಆಯೋಜಿಸುವ ಮೂಲಕ ಜಿಲ್ಲೆ, ರಾಜ್ಯ ಮತ್ತು ರಾಷ್ಟದ ಕೀರ್ತಿಯನ್ನು ಹೆಚ್ಚಿಸೋಣ. ಈ ಪಂದ್ಯಾವಳಿಗೆ ಸರ್ಕಾರದಿಂದ ಮತ್ತು ವೈಯಕ್ತಿಕವಾಗಿಯೂ ನೆರವು ನೀಡಲಾಗುವುದು ಎಂದು ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದ್ದಾರೆ. ಧಾರವಾಡ ಜಿಲ್ಲಾ ಲಾನ್ ಟೆನಿಸ್ ಸಂಸ್ಥೆಯ ಕ್ರೀಡಾಂಗಣದ ರಾಜ್ಯಾಧ್ಯಕ್ಷ ಪೆವಿಲಿಯನ್‌ದಲ್ಲಿ ನಿರ್ಮಿಸಿರುವ ನೂತನ ಸೌಲಭ್ಯಗಳನ್ನು ಉದ್ಘಾಟಿಸಿ, ಮಾತನಾಡಿದರು.

<><><>

ರಾಜ್ಯ ಸರ್ಕಾರ ಮೊದಲಿನಿಂದಲೂ ಕಾವೇರಿ ವಿಚಾರದಲ್ಲಿ ತಪ್ಪು ಹೆಜ್ಜೆ ಇಡುತ್ತಿದೆ. ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸುವುದರಲ್ಲಿ ವಿಳಂಬ ಧೋರಣೆ ಅನುಸರಿಸಿದೆ. ಈ ಎಲ್ಲ ಕ್ರಮಗಳಿಂದ ರಾಜ್ಯಕ್ಕೆ ಹೆಚ್ಚಿನ ಹಿನ್ನಡೆಯಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ತಮಿಳುನಾಡಿಗೆ ಕಾವೇರಿ ನೀರು ಹರಿಸುವುದನ್ನು ವಿರೋಧಿಸಿ ಮಂಡ್ಯ ಜಿಲ್ಲಾ ಹಿತರಕ್ಷಣಾ ಸಮಿತಿ ನಡೆಸುತ್ತಿರುವ ಪ್ರತಿಭಟನೆಯಲ್ಲಿ ನಿನ್ನೆ ಪಾಲ್ಗೊಂಡು ಮಾತನಾಡಿದ ಅವರು; ರಾಜ್ಯದಲ್ಲಿ ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೂ ಹಾಹಾಕಾರ ಉಂಟಾಗಲಿದೆ. ಹಲವು ತಾಲೂಕುಗಳಲ್ಲಿ ಬರಗಾಲ ಪರಿಸ್ಥಿತಿಯಿದೆ. ಈ ನಿಟ್ಟಿನಲ್ಲಿ ಸರ್ಕಾರವು ಈಗಾಲಾದರೂ ಸುಪ್ರೀಂ ಕೋರ್ಟ್‌ಗೆ ರಾಜ್ಯದ ಪರಿಸ್ಥಿತಿಯನ್ನು ಮನದಟ್ಟು ಮಾಡಿಕೊಡಬೇಕು ಎಂದು ತಿಳಿಸಿದರು.

<><><>

ಅರಣ್ಯ ನಾಶವನ್ನು ತಡೆಗಟ್ಟುವುದು ಪ್ರತಿಯೊಬ್ಬ ಪ್ರಜೆಯ ಗುರುತರ ಜವಾಬ್ದಾರಿಯಾಗಬೇಕು. ಮುಂದಿನ ಪೀಳಿಗೆಗೆ ಅರಣ್ಯವನ್ನು ಉಳಿಸಿಕೊಳ್ಳಬೇಕು ಎಂದು ಮೈಸೂರು ಜಿಲ್ಲಾಧಿಕಾರಿ ಡಾಕ್ಟರ್ ಕೆ.ವಿ.ರಾಜೇಂದ್ರ ಹೇಳಿದ್ದಾರೆ. ವನ್ಯಜೀವ ಸಪ್ತಾಹದ ಅಂಗವಾಗಿ ಮೈಸೂರು ಜಿಲ್ಲಾಡಳಿತ, ಅರಣ್ಯ ಇಲಾಖೆ ಮತ್ತು ಚಾಮರಾಜೇಂದ್ರ ಮೃಗಾಲಯದ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಜನಜಾಗೃತಿ ಅಭಿಯಾನಕ್ಕೆ ಅವರು ಚಾಲನೆ ನೀಡಿ ಮಾತನಾಡಿದರು. ಚಾಮರಾಜೇಂದ್ರ ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕ ಡಿ.ಮಹೇಶ್‌ಕುಮಾರ್, ಇಂದಿನಿಂದ ಅಕ್ಟೋಬರ್ 8ರ ವರೆಗೆ ವನ್ಯಜೀವಿ ಸಪ್ತಾಹವನ್ನು ಹಮ್ಮಿಕೊಳ್ಳಲಾಗಿದ್ದು, ಮೃಗಾಲಯದ ಆವರಣದಲ್ಲಿ ಛಾಯಾಚಿತ್ರ ಪ್ರದರ್ಶನವನ್ನು ಏರ್ಪಡಿಸಲಾಗಿದೆ ಎಂದು ಹೇಳಿದರು. ಜಾಗೃತಿ ಜಾಥಾದಲ್ಲಿ ಹುಲಿ ಹಾಗೂ ಕರಡಿ ವೇಷಧಾರಿಗಳು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದ್ದು ವಿಶೇಷವಾಗಿತ್ತು. ಜಾಥಾವು ನಗರದ ಪ್ರಮುಖ ಬೀದಿಗಳಲ್ಲಿ ಸಾಗಿ ಅರಿವು ಮೂಡಿಸಿತು.

<><><>

ಸುಗಮ ಸಂಚಾರ ಹಾಗೂ ಪ್ರಯಾಣಿಕರ ಅನುಕೂಲಕ್ಕಾಗಿ 314 ರೈಲುಗಳ ವೇಳಾಪಟ್ಟಿ ಪರಿಷ್ಕರಿಸಲಾಗಿದೆ ಎಂದು ರೈಲು ವಾಣಿಜ್ಯ ವಿಭಾಗದ ವ್ಯವಸ್ಥಾಪಕ ಎಲ್.ಲೋಹಿತೇಶ್ವರ್ ತಿಳಿಸಿದ್ದಾರೆ. ಮೈಸೂರಿನಲ್ಲಿ ನಿನ್ನೆ ಮಾತನಾಡಿದ ಅವರು, ನೂತನ ರೈಲುಗಳ ಪರಿಚಯ, ರೈಲು ಬೋಗಿಗಳ ಹೆಚ್ಚಳ, ರೈಲು ವಿಸ್ತರಣೆ ಸೇರಿದಂತೆ ವಿವಿಧ ಕಾರಣಗಳಿಂದಾಗಿ ಪ್ರಯಾಣಿಕರಿಗೆ ತೊಂದರೆಯಾಗಬಾರದು ಎನ್ನುವ ನಿಟ್ಟಿನಲ್ಲಿ ಈ ಪರಿಷ್ಕರಣೆಯನ್ನು ಜಾರಿಗೊಳಿಸಲಾಗಿದೆ. ಮೈಸೂರು ವಿಭಾಗೀಯ ರೈಲು ನಿಲ್ದಾಣಗಳಿಂದ ಸಂಚರಿಸುವ ಮೈಸೂರು–ಬೆಂಗಳೂರು, ಮೈಸೂರು–ದೆಹಲಿ ಸೇರಿದಂತೆ 314 ರೈಲುಗಳ ವೇಳಾಪಟ್ಟಿಯಲ್ಲಿ ಬದಲಾವಣೆ ಮಾಡಲಾಗಿದ್ದು, ಪ್ರಯಾಣಿಕರು ನೈರುತ್ಯ ರೈಲ್ವೆ ವಲಯದ ವೆಬ್‌ಸೈಟ್‌ನಲ್ಲಿ ಹೆಚ್ಚಿನ ಮಾಹಿತಿ ಪಡೆಯಬಹುದು ಎಂದು ತಿಳಿಸಿದರು.